# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 723

ಸದಸ್ಯರ ಹೆಸರು : ಶ್ರೀ ಐವನ್ ಡಿ'ಸೋಜಾ

ಉತ್ತರಿಸುವ ದಿನಾಂಕ : 10/03/2026

ಉತ್ತರಿಸುವ ಸಚಿವರು : ಮಾನ್ಯ ಪೌರಾಡಳಿತ ಹಾಗೂ ಹಜ್ ಸಚಿವರು

| | ಪ್ರಶ್ನೆ | ಉತ್ತರ |
|---|---|---|
| ಅ) | ಪೌರಾಡಳಿತ ಇಲಾಖೆಯಿಂದ ಮೇಲ್ದರ್ಜೆಗೇರಿಸಲು ಪುರಸಭೆ, ಪಟ್ಟಣ ಪಂಚಾಯತ್ ನಗರ ಸಭೆಗಳಲ್ಲಿ 4/5 ವರ್ಷಗಳಿಂದ ಚುನಾವಣೆ ನಡೆಸದೇ ಇರಲು ಕಾರಣಗಳೇನು; (ವಿವರ ನೀಡುವುದು) | ರಾಜ್ಯದಲ್ಲಿ ಹೊಸದಾಗಿ ರೂಪಿಸಲಾಗುವ ಪಟ್ಟಣ ಪಂಚಾಯಿತಿ, ಪುರಸಭೆ, ನಗರಸಭೆಗಳಿಗೆ ಕರ್ನಾಟಕ ಪೌರಸಭೆಗಳ ಅಧಿನಿಯಮ 1964ರ ಕಲಂ-11 ರನ್ವಯ 2011ರ ಜನಗಣತಿ ಜನಸಂಖ್ಯೆಯನ್ನಾಧರಿಸಿ ಸಂಬಂಧಪಟ್ಟ ಜಿಲ್ಲಾಧಿಕಾರಿಗಳು ಆಯಾ ನಗರ ಸ್ಥಳೀಯ ಸಂಸ್ಥೆಯಲ್ಲಿ ನಿಯಮಾನುಸಾರ ವಾರ್ಡ್‌ಗಳನ್ನು ಗುರುತಿಸುತ್ತಾರೆ. ತದನಂತರ ವಾರ್ಡ್ ವಿಂಗಡಣೆಯ ಅಧಿಸೂಚನೆಯನ್ನು ರಾಜ್ಯಪತ್ರದಲ್ಲಿ ಪ್ರಕಟಿಸಿ ವಾರ್ಡ್‌ವಾರು ಜನಸಂಖ್ಯೆಯ ಮಾಹಿತಿಯನ್ನು ಸರ್ಕಾರಕ್ಕೆ ಸಲ್ಲಿಸುತ್ತಾರೆ. ಆನಂತರ, ಕರ್ನಾಟಕ ಪೌರಸಭೆಗಳ ಅಧಿನಿಯಮ 1964ರ ಕಲಂ-11 & 13 ಹಾಗೂ ಮಾರ್ಗಸೂಚಿಗಳನ್ನು ಆಧರಿಸಿ ಸರ್ಕಾರದ ಹಂತದಲ್ಲಿ ಪ್ರತಿಯೊಂದು ನಗರ ಸ್ಥಳೀಯ ಸಂಸ್ಥೆಗೆ ವಾರ್ಡ್ ವಾರು ಮೀಸಲಾತಿಯನ್ನು ನಿಗಧಿಪಡಿಸಿ ಆಕ್ಷೇಪಣೆಗಳನ್ನು ಆಹ್ವಾನಿಸಿ ಪ್ರಾಥಮಿಕ ಅಧಿಸೂಚನೆಯನ್ನು ರಾಜ್ಯಪತ್ರದಲ್ಲಿ ಪ್ರಕಟಿಸಲಾಗುತ್ತದೆ. ತದನಂತರ ಸ್ವೀಕೃತವಾಗುವ ಆಕ್ಷೇಪಣೆಗಳನ್ನು ಪರಿಶೀಲಿಸಿ ವಾರ್ಡ್‌ವಾರು ಮೀಸಲಾತಿಯ ಅಂತಿಮ ಅಧಿಸೂಚನೆಯನ್ನು ರಾಜ್ಯಪತ್ರದಲ್ಲಿ ಪ್ರಕಟಿಸಲಾಗುತ್ತದೆ.<br><br>2020 ರ ನಂತರ ಹೊಸದಾಗಿ ಮೇಲ್ದರ್ಜೆಗೇರಿಸಲಾದ ಪಟ್ಟಣ ಪಂಚಾಯಿತಿ, ಪುರಸಭೆ, ನಗರಸಭೆಗಳಿಗೆ ವಾರ್ಡುವಾರು ಮೀಸಲಾತಿ ನಿಗದಿಪಡಿಸುವ ಕುರಿತಂತೆ ಕೆಳಕಂಡ ನ್ಯಾಯಾಲಯ ಪ್ರಕರಣ ಬಾಕಿ ಇತ್ತು:<br><br>ಮಾನ್ಯ ಸರ್ವೋಚ್ಚ ನ್ಯಾಯಾಲಯದ ಎಸ್.ಎಲ್.ಪಿ. ಸಂಖ್ಯೆ:19756/2021ರಲ್ಲಿ ದಿನಾಂಕ:15.12.2021 ರಂದು ನೀಡಿರುವ ತೀರ್ಪು ಹಾಗೂ Manmohan Nagar V/s State of Madhya Pradesh & Others ರವರು ಸಲ್ಲಿಸಿರುವ ಮಿಸಲೇನಿಯಸ್ ಅಪ್ಲಿಕೇಷನ್ ಸಂಖ್ಯೆ:31495/2021ಗೆ ಸಂಬಂಧಿಸಿದಂತೆ ದಿನಾಂಕ:17.12.2021ರ ಆದೇಶದನ್ವಯ ವಿವಿಧ ಪ್ರವರ್ಗಗಳಲ್ಲಿ ಹಿಂದುಳಿದ ವರ್ಗಗಳಿಗೆ ರಾಜಕೀಯ ಪ್ರಾತಿನಿಧ್ಯ ಕಲ್ಪಿಸುವ ಕುರಿತಂತೆ ನಿಗದಿಪಡಿಸಬೇಕಾದ ಮೀಸಲಾತಿಗೆ ಸಂಬಂಧಿಸಿದಂತೆ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ನ್ಯಾಯಮೂರ್ತಿ ಕೆ. ಭಕ್ತವತ್ಸಲ ಅಧ್ಯಕ್ಷತೆಯ ಆಯೋಗವನ್ನು ರಚಿಸಲಾಗಿತ್ತು. ಸದರಿ |

| | | |
|---|---|---|
| | | ಆಯೋಗದ ವರದಿಯನ್ನು ನಿರೀಕ್ಷಿಸಿ, ಮೀಸಲಾತಿ ನಿಗದಿಪಡಿಸುವ ಪ್ರಕ್ರಿಯೆಯನ್ನು ಬಾಕಿ ಇಡಲಾಗಿತ್ತು. ಆಯೋಗವು ಇದುವರೆಗೆ ಅನುಸರಿಸಿರುವಂತೆ ಹಿಂದುಳಿದ ವರ್ಗಗಳಿಗೆ 33% ರ ಮೀಸಲಾತಿ ಪ್ರಮಾಣವನ್ನು ಮುಂದುವರೆಸಬೇಕೆಂದು ಶಿಫಾರಸ್ಸು ಮಾಡಿ, ನಗರಾಭಿವೃದ್ಧಿ ಇಲಾಖೆಯ ನಗರ ಸ್ಥಳೀಯ ಸಂಸ್ಥೆಗಳ ಚುನಾವಣಾ ವಿಭಾಗವನ್ನು ಸಿಆಸು ಇಲಾಖೆಯ ಅಧೀನಕ್ಕೆ ತರುವಂತೆ ಶಿಫಾರಸ್ಸು ಮಾಡಲಾಗಿತ್ತು.<br><br>ಈ ವಿಷಯವಾಗಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯು ಸರ್ಕಾರದ ಆದೇಶ ಸಂಖ್ಯೆ:ಹಿಂವಕ 114 ಬಿಸಿಎ 2022(ಭಾಗ-6); ದಿನಾಂಕ:06/07/2024 ರಲ್ಲಿ ಆಯೋಗದಿಂದ ಮಾಡಲಾಗಿದ್ದ ನಗರ ಸ್ಥಳೀಯ ಸಂಸ್ಥೆಗಳ ಚುನಾವಣಾ ವಿಭಾಗವನ್ನು ಸಿಆಸು ಇಲಾಖೆಯ ಅಧೀನಕ್ಕೆ ತರಬೇಕೆಂಬ ಶಿಫಾರಸ್ಸನ್ನು ಕೈಬಿಟ್ಟಿರುತ್ತದೆ ಹಾಗೂ ನಗರಾಭಿವೃದ್ಧಿ ಇಲಾಖೆ ಹಾಗೂ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಇಲಾಖೆಗಳ ಚುನಾವಣಾ ಘಟಕಗಳನ್ನು ಆಯಾ ಇಲಾಖೆಗಳ ನಿಯಂತ್ರಣದಲ್ಲಿ ಉಳಿಸಿ, ಪ್ರಸ್ತುತ ಚಾಲ್ತಿಯಲ್ಲಿರುವ ವ್ಯವಸ್ಥೆಯನ್ನು ಮುಂದುವರೆಸಲಾಗಿದೆ ಎಂದು ಆದೇಶಿಸಿರುತ್ತದೆ. ಅದರಂತೆ, ಪ್ರಸ್ತುತ ನಗರಾಭಿವೃದ್ಧಿ ಇಲಾಖೆಯಲ್ಲಿ ಕ್ರಮವಹಿಸಲಾಗುತ್ತಿದೆ. ಈ ಎಲ್ಲಾ ಕಾರಣಗಳಿಂದಾಗಿ ಹೊಸದಾಗಿ ಮೇಲ್ದರ್ಜೆಗೇರಿಸಿರುವ ನಗರ ಸ್ಥಳೀಯ ಸಂಸ್ಥೆಗಳಿಗೆ ವಾರ್ಡ್‌ವಾರು ವಿವಿಧ ಪ್ರವರ್ಗಗಳಿಗೆ ಮೀಸಲಾತಿಯನ್ನು ನಿಗದಿಪಡಿಸಲು ಹೆಚ್ಚಿನ ಕಾಲಾವಕಾಶ ತಗುಲಿರುತ್ತದೆ. ಪ್ರಸ್ತುತ ವಾರ್ಡ್ ವಿಂಗಡಣೆ ಕಾರ್ಯ ಪೂರ್ಣಗೊಂಡಿರುವ ನಗರ ಸ್ಥಳೀಯ ಸಂಸ್ಥೆಗಳಿಗೆ ವಾರ್ಡ್ ವಾರು ಮೀಸಲಾತಿಯನ್ನು ನಿಗಧಿಪಡಿಸಲು ಕ್ರಮವಹಿಸಲಾಗುತ್ತಿದೆ. |
| ಆ) | ಚುನಾವಣೆ ನಡೆಸದೇ ನಗರಸಭೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಅಧಿಕಾರಿಗಳು ಸಾರ್ವಜನಿಕರಿಗೆ ತೊಂದರೆ ಆಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; (ವಿವರ ನೀಡುವುದು) | ಹೊಸದಾಗಿ ಮೇಲ್ದರ್ಜೆಗೇರಿಸಲಾದ ನಗರಸಭೆಗಳಿಗೆ ಆಡಳಿತಾತ್ಮಕ ಹಿತದೃಷ್ಟಿಯಿಂದ ಕರ್ನಾಟಕ ಪೌರಸಭೆಗಳ ಕಾಯ್ದೆ 1964 ಕಲಂ 315 ರನ್ವಯ ಸಂಬಂಧಪಟ್ಟ ಜಿಲ್ಲೆಯ ಜಿಲ್ಲಾಧಿಕಾರಿಯನ್ನು ಆಡಳಿತಾಧಿಕಾರಿಯನ್ನಾಗಿ ನೇಮಿಸಲಾಗಿದೆ. ಆಡಳಿತಾಧಿಕಾರಿಗಳು ಸಾರ್ವಜನಿಕರಿಗೆ ಯಾವುದೇ ತೊಂದರೆ ಆಗದಂತೆ ಕಾರ್ಯನಿರ್ವಹಿಸುತ್ತಿರುತ್ತಾರೆ. |
| ಇ) | ಇಲಾಖೆ ಮೇಲ್ದರ್ಜೆಗೆ ಏರಿಸಲು ಎಷ್ಟು ಪುರಸಭೆ, ನಗರಸಭೆಗಳ ಪ್ರಸ್ತಾವನೆಗಳು ಇದೆ: (ವಿವರ ನೀಡುವುದು) | ದೇಶದಾದ್ಯಂತ ಜನಗಣತಿಯನ್ನು ಕೈಗೊಳ್ಳಬೇಕಾಗಿರುವ ಹಿನ್ನೆಲೆಯಲ್ಲಿ ದಿನಾಂಕ:31/12/2025 ಕ್ಕೆ ಜನಗಣತಿ ಕಾರ್ಯಾಚರಣೆ ನಿರ್ದೇಶನಾಲಯ, ಕರ್ನಾಟಕ, ಬೆಂಗಳೂರು ರವರ ನಿರ್ದೇಶನದನ್ವಯ ರಾಜ್ಯದಲ್ಲಿ ಹೊಸ ನಗರ ಸ್ಥಳಿಯ ಸಂಸ್ಥೆಗಳನ್ನು ರಚಿಸುವ ಮತ್ತು ಗಡಿಗಳನ್ನು ಮಾರ್ಪಡಿಸುವ ಕಾಲಾವಕಾಶ ಮುಕ್ತಾಯಗೊಂಡಿರುತ್ತದೆ. ಆದ್ದರಿಂದ ಪ್ರಸ್ತುತ, ಹೊಸದಾಗಿ ಸ್ಥಳೀಯ ಸಂಸ್ಥೆಗಳನ್ನು ರಚಿಸುವ ಕುರಿತು ಪರಿಶೀಲಿಸಲಾಗುತ್ತಿರುವುದಿಲ್ಲ. |

| | | |
|---|---|---|
| | | ಆದರೆ ಪುರಸಭೆ ಮತ್ತು ನಗರಸಭೆಗಳನ್ನು ರಚಿಸುವುದಕ್ಕಾಗಿ ಈ ಕೆಳಕಂಡ ನಗರ ಸ್ಥಳೀಯ ಸಂಸ್ಥೆಗಳ ಪ್ರಾಥಮಿಕ ಅಧಿಸೂಚನೆಗಳನ್ನು ರಾಜ್ಯಪತ್ರದಲ್ಲಿ ಪ್ರಕಟಿಸಿದ್ದು, ಅಂತಿಮ ಅಧಿಸೂಚನೆಗಳನ್ನು ರಾಜ್ಯಪತ್ರದಲ್ಲಿ ಪ್ರಕಟಿಸುವ ಕ್ರಮ ಬಾಕಿ ಇರುತ್ತದೆ:<br>1. ರಾಮದುರ್ಗ ಪುರಸಭೆಯಿಂದ ನಗರಸಭೆಯನ್ನಾಗಿ ಮೇಲ್ದರ್ಜೆಗೇರಿಸುವ ಪ್ರಸ್ತಾವನೆ;<br>2. ಅಥಣಿ ಪುರಸಭೆಯಿಂದ ನಗರಸಭೆಯನ್ನಾಗಿ ಮೇಲ್ದರ್ಜೆಗೇರಿಸುವ ಪ್ರಸ್ತಾವನೆ;<br>3. ಹಾರೋಹಳ್ಳಿ ಪಟ್ಟಣ ಪಂಚಾಯಿತಿಯಿಂದ ಪುರಸಭೆಯನ್ನಾಗಿ ಮೇಲ್ದರ್ಜೆಗೇರಿಸುವ ಪ್ರಸ್ತಾವನೆ;<br>4. ಕುಂದಗೋಳ ಪಟ್ಟಣ ಪಂಚಾಯಿತಿಯಿಂದ ಪುರಸಭೆಯನ್ನಾಗಿ ಮೇಲ್ದರ್ಜೆಗೇರಿಸುವ ಪ್ರಸ್ತಾವನೆ. |
| ಈ) | ಇಲಾಖೆಯಲ್ಲಿ ಎಷ್ಟು ಮಂದಿ ನೌಕರರಿಗೆ ಅರ್ಹತೆ ಇಲ್ಲದೆ ಮೇಲ್ದರ್ಜೆಯ ಹುದ್ದೆಗೆ ಅನುಮತಿ ನೀಡಲಾಗಿದೆ? (ವಿವರ ನೀಡುವುದು) | ಕರ್ನಾಟಕ ನಾಗರೀಕ ಸೇವಾ ನಿಯಮಗಳು 1957 ಹಾಗೂ ಪೌರಾಡಳಿತ ವೃಂದದ ಕೆ.ಎಂ.ಎ.ಎಸ್. ಯೇತರ ಅಧಿಕಾರಿ ಮತ್ತು ನೌಕರರ ವೃಂದ ಮತ್ತು ನೇಮಕಾತಿ ನಿಯಮಗಳು 2011 ಮತ್ತು ಪೌರಾಡಳಿತ ವೃಂದದ ಕೆ.ಎಂ.ಎ.ಎಸ್. ಅಧಿಕಾರಿಗಳ ವೃಂದ ಮತ್ತು ನೇಮಕಾತಿ ನಿಯಮಗಳು 2022ರಲ್ಲಿರುವ ಅವಕಾಶಗಳನ್ವಯ ಮತ್ತು ಕಾಲಕಾಲಕ್ಕೆ ಅನ್ವಯವಾಗುವ ನಿಯಮಗಳು, ಸುತ್ತೋಲೆಗಳು ಮತ್ತು ಆದೇಶಗಳನ್ವಯ ಅನುಮತಿ ನೀಡಲಾಗಿರುತ್ತದೆ. |

**ಸಂಖ್ಯೆ:** ನಅಇ 11 ಎಲ್‌ಸಿಕ್ಯೂ 2026

(ರಹೀಂ ಖಾನ್)
ಪೌರಾಡಳಿತ ಮತ್ತು ಹಜ್ ಸಚಿವರು